ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ತು

ಪತ್ರಿಕೆಯ ಹೆಸರು : NAME OF THE NEWS PAPER : ಪ್ರಜಾವಾಣಿ ದಿನಾಂಕ : DATE : 30/05/2019

# ಅಲ್ಪಸಂಖ್ಯಾತರ ಆಯೋಗಕ್ಕೆ ಬಾವಾ, ಪರಿಷತ್ತಿಗೆ ತಿಪ್ಪಣ್ಣಪ್ಪ

30-5-19

ಪ್ರಜಾವಾಣಿ ವಾರ್ತೆ

ಬೆಂಗಳೂರು: ವಿಧಾನ ಪರಿಷತ್ ಸದಸ್ಯರಾಗಿ ಕಲಬುರ್ಗಿಯ ತಿಪ್ಪಣ್ಣಪ್ಪ ಕಮಕನೂರ ಹಾಗೂ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾಗಿ ಜಿ.ಎ.ಬಾವಾ ಅವರನ್ನು ನೇಮಕ ಮಾಡಲಾಗಿದೆ.

ವಿ.ಎಸ್.ಉಗ್ರಪ್ಪ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ತಿಪ್ಪಣ್ಣಪ್ಪ ಅವರನ್ನು ನೇಮಿಸಿ ರಾಜ್ಯಪಾಲರು ಆದೇಶ ಹೊರಡಿಸಿದ್ದಾರೆ. ಇವರ ಅಧಿಕಾರ ಅವಧಿ 2020 ಜೂನ್ 23ರ ವರೆಗೆ ಇರಲಿದೆ.

ಕೋಲಿ ಸಮಾಜದ ನಾಯಕರಾಗಿದ್ದ ಬಾಬುರಾವ್ ಚಿಂಚನಸೂರ ಕಾಂಗ್ರೆಸ್ ತೊರೆದು, ಬಿಜೆಪಿ ಸೇರಿದ್ದಾರೆ. ಕಲಬುರ್ಗಿ


ಜಿ. ಎ. ಬಾವಾ


ತಿಪ್ಪಣ್ಣಪ್ಪ

ಭಾಗದಲ್ಲಿ ಕೋಲಿ ಸಮುದಾಯ ಗಣನೀಯ ಸಂಖ್ಯೆಯಲ್ಲಿ ಇರುವುದರಿಂದ ಚಿಂಚನಸೂರ ಬದಲಿಗೆ ಮತ್ತೊಬ್ಬರಿಗೆ ಅವಕಾಶ ನೀಡಲು ಕಾಂಗ್ರೆಸ್ ಮುಖಂಡರು ಮುಂದಾಗಿದ್ದರು. ಹಿರಿಯ ಮುಖಂಡ ಮಲ್ಲಿಕಾರ್ಜುನ ಖರ್ಗೆ ಸಲಹೆ ಮೇರೆಗೆ ತಿಪ್ಪಣ್ಣಪ್ಪ ಅವರನ್ನು ನೇಮಕ ಮಾಡುವಂತೆ ಸರ್ಕಾರ ಶಿಫಾರಸು ಮಾಡಿತ್ತು.

ಲೋಕಸಭೆ ಚುನಾವಣೆಯ ಲೆಕ್ಕಾಚಾರ ಇಟ್ಟುಕೊಂಡಿದ್ದ ಕಾಂಗ್ರೆಸ್ ನಾಯಕರು, ತಿಪ್ಪಣ್ಣಪ್ಪ ಅವರನ್ನು ನೇಮಕ ಮಾಡುವಂತೆ ಮುಖ್ಯಮಂತ್ರಿ ಕುಮಾರಸ್ವಾಮಿ ಅವರಿಗೆ ಮನವಿ ಮಾಡಿದ್ದರು. ಈ ಕಡತ ರಾಜಭವನದಲ್ಲೇ ಉಳಿದಿತ್ತು. ಚುನಾವಣೆ ನಂತರ ರಾಜ್ಯಪಾಲರು ಆದೇಶ ಹೊರಡಿಸಿದ್ದಾರೆ.

**ನೇಮಕ:** ಸಮ್ಮಿಶ್ರ ಸರ್ಕಾರ ಉಳಿಸಿಕೊಳ್ಳಲು ಕಾಂಗ್ರೆಸ್, ಜೆಡಿಎಸ್ ಮುಖಂಡರು ಪ್ರಯತ್ನ ಮುಂದುವರಿಸಿರುವುದರ ನಡುವೆಯೇ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾಗಿ ಜಿ.ಎ.ಬಾವಾ ಅವರನ್ನು ನೇಮಿಸಿದೆ. ಸಮ್ಮಿಶ್ರ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಆಯೋಗದ ಅಧ್ಯಕ್ಷರ ಸ್ಥಾನ ಖಾಲಿ ಇತ್ತು.